ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ರಾಜ್ಯದ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅನ್‌ಸ್ಕಿಲ್ಡ್ ಆಗಿ ಕೆಲಸ ನಿರ್ವಹಿಸುವವರಿಗೆ ಸಂಬಳ ನೀಡದಿರುವ ಬಗ್ಗೆ

ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

45 (48) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅನ್‌ಸ್ಕಿಲ್ಡ್ ಆಗಿ ಕೆಲಸ ನಿರ್ವಹಿಸುತ್ತಿರುವವರಿಗೆ ಸಂಬಳ ಕೊಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಲವಾರು ತಿಂಗಳುಗಳಿಂದ ಸಂಬಳ ಸಿಗದೇ ಸರ್ಕಾರದ ಮಟ್ಟದಲ್ಲಿ ಅಧಿಕಾರಿಗಳನ್ನು ಮತ್ತು ಜನಪ್ರತಿನಿಧಿಗಳನ್ನು ಸಂಪರ್ಕಿಸಿ ಅಲೆದಾಡುತ್ತಿರುವಂತಹ ಈ ಅನ್‌ಸ್ಕಿಲ್ಡ್ ನೌಕರರ ಕಷ್ಟವನ್ನು ಸರ್ಕಾರ ಅರಿತು ಇವರುಗಳಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ನೀಡಲು ಕ್ರಮ ಜರುಗಿಸಲಾಗುವುದೇ?